ಕ್ರ.ಸಂ: _____

# ಅರ್ಜಿ ನಮೂನೆ

ಇತ್ತೀಚಿನ ಭಾವಚಿತ್ರ ಅಂಟಿಸಿ ಅದರ ಮೇಲೆ ಸಹಿ ಮಾಡಬೇಕು.

## ಪ್ರವಾಸೋದ್ಯಮ ಇಲಾಖೆ, ವಿಜಯಪುರ ಜಿಲ್ಲೆ

2016-17ನೇ ಸಾಲಿನ(ಹಿಂಬಾಕಿ) ಹಿಂದುಳಿದ ಹಾಗೂ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಪ್ರವಾಸಿ ಟ್ಯಾಕ್ಸಿ ಖರೀದಿಸಲು ಸಾಲ ಸೌಲಭ್ಯ ಕೋರಿ ಅರ್ಜಿ

| | | |
|---|---|---|
| 1. | ಅಭ್ಯರ್ಥಿಯ ಹೆಸರು<br>ತಂದೆಯ ಹೆಸರು<br>ಪೂರ್ಣ ವಿಳಾಸ | |
| 2. | ದೂರವಾಣಿ / ಮೊಬೈಲ್ ಸಂಖ್ಯೆ ನಮೂದಿಸುವುದು ಕಡ್ಡಾಯ. | |
| 3. | ತಹಶೀಲದಾರರು, ಮಹಾನಗರಪಾಲಿಕೆ / ನಗರ ಸಭೆ/ಪುರಸಭೆ/ಗ್ರಾಮ ಪಂಚಾಯತಿ/ಪಟ್ಟಣ ಪಂಚಾಯತಿ- ಗಳಿಂದ ಪಡೆದಿರುವ ವಾಸಸ್ಥಳದ ಧೃಢೀಕರಣ ಪತ್ರದ ಪ್ರತಿ. | |
| 4. | ವಿಧಾನಸಭಾ ಮತಕ್ಷೇತ್ರದ ಹೆಸರು | |
| 5. | ಜಾತಿ / ಉಪಜಾತಿ:<br>(ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಪ್ರಮಾಣ ಪತ್ರದ ಪ್ರತಿ.) | |
| 6. | ಕುಟುಂಬದ ವಾರ್ಷಿಕ ಆದಾಯ<br>(ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರದ ಪ್ರತಿ.) | |
| 7. | ಪಡಿತರ ಚೀಟಿ(ಬಿ.ಪಿ.ಎಲ್. ಕಾರ್ಡದಾರರಿಗೆ ಆದ್ಯತೆ) ಹಾಗೂ ಆಧಾರ ಕಾರ್ಡ ಪ್ರತಿ | |
| 8. | ಎಲ್.ಎಂ.ವಿ. ಲೈಸೆನ್ಸ್ ಹಾಗೂ ಬ್ಯಾಡ್ಜ್ ಹೊಂದಿರುವ ಬಗ್ಗೆ ಆರ್.ಟಿ.ಓ.(RTO) ಕಛೇರಿಯಿಂದ ಪ್ರಸ್ತುತ ಪಡೆದಿರುವ ಡಿ.ಎಲ್. ಎಕ್ಸಟ್ರಾಕ್ಟ್ ಪ್ರತಿ. | |

| | | |
|---|---|---|
| 9. | ಜನ್ಮ ದಿನಾಂಕ (ಎಸ್.ಎಸ್.ಎಲ್.ಸಿ. ಅಂಕಪಟ್ಟಿಯಲ್ಲಿ ಇರುವಂತೆ) :<br>ವಯಸ್ಸು (ಅರ್ಜಿದಾರರು ೨೦ ರಿಂದ ೪೦ ವರ್ಷದೊಳಗಿರಬೇಕು.) : | |
| 10. | ವಿದ್ಯಾರ್ಹತೆ: ಎಸ್.ಎಸ್.ಎಲ್.ಸಿ. ಉತ್ತೀರ್ಣರಾಗಿರುವ ಬಗ್ಗೆ ಪಡೆದಿರುವ ಅಂಕಪಟ್ಟಿಯ ಪ್ರತಿ ಹಾಗೂ ಪಡೆದ ಅಂಕಗಳ ಶೇಕಡಾವಾರು(%) | |
| 11. | ಅರ್ಜಿದಾರರು ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರದ ಬಗ್ಗೆ, ಅಭ್ಯರ್ಥಿಯ ಕುಟುಂಬದಲ್ಲಿ ಯಾವ ಒಬ್ಬ ಸದಸ್ಯನು ಸರ್ಕಾರಿ ನೌಕರಿ ಹೊಂದಿಲ್ಲದ ಬಗ್ಗೆ, ವಿಜಯಪುರ ಮಹಾನಗರ ಪಾಲಿಕೆ/ನಗರ ಸಭೆ / ಪುರಸಭೆ/ಗ್ರಾಮಪಂಚಾಯತಿ/ಪಟ್ಟಣ ಪಂಚಾಯತಿ ಇವುಗಳಿಂದ ಸ್ವಉದ್ಯೋಗ ಕಲ್ಪಿಸಿಕೊಳ್ಳುವ ಸೌಲಭ್ಯ ಪಡೆಯದೇ ಇರುವ ಬಗ್ಗೆ, ಕುಟುಂಬದ ಯಾವ ಸದಸ್ಯನು ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಪಡೆದಿಲ್ಲ ಎಂಬ ಬಗ್ಗೆ ಸ್ವಯಂ ಪ್ರಮಾಣೀಕರಿಸಿ ರೂ.೫೦/- ರ ಬೆಲೆಯ ಛಾಪಾ ಕಾಗದ(Affidavit)ದಲ್ಲಿ ನಮೂನೆ-೦೩ ರಂತೆ ಸಿದ್ಧಪಡಿಸಿದ ಮುಚ್ಚಳಿಕೆ ಪತ್ರ. | |
| 12. | ಅರ್ಜಿದಾರರು ಕಲಿತಿರುವ ಭಾಷೆಗಳು ( ✓ ಚಿಹ್ನೆಯಿಂದ ಗುರುತಿಸಿ)<br>ಕನ್ನಡ :<br>ಹಿಂದಿ :<br>ಇಂಗ್ಲೀಷ್ : | ಓದಲು: ಬರೆಯಲು: ಮಾತನಾಡಲು;<br>☐ ☐ ☐<br>☐ ☐ ☐<br>☐ ☐ ☐ |

**** ಅಭ್ಯರ್ಥಿಯು ಮೇಲಿನ ಎಲ್ಲಾ ದಾಖಲಾತಿಗಳನ್ನು ದ್ವಿಪ್ರತಿಯಲ್ಲಿ ಲಗತ್ತಿಸಿ ಸ್ವಯಂ ದೃಢೀಕರಿಸಿ ಸಲ್ಲಿಸತಕ್ಕದ್ದು.**

ಮೇಲಿನ ಅರ್ಜಿ ನಮೂನೆಯಲ್ಲಿ ನೀಡಿರುವ ಎಲ್ಲ ಮಾಹಿತಿಗಳು ನೈಜತೆಯನ್ನು ಹೊಂದಿವೆ ಎಂದು ಈ ಮೂಲಕ ಪ್ರಮಾಣೀಕರಿಸುತ್ತೇನೆ.

ಸ್ಥಳ: ವಿಜಯಪುರ

ದಿನಾಂಕ: **ಅಭ್ಯರ್ಥಿಯ ಸಹಿ**

ಈ-ಮೇಲ್: adrtobijapur2014@gmail.com

ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು,ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ, ವಿಜಯಪುರ ಜಿಲ್ಲೆ, ವಿಜಯಪುರ ರವರ ಕಾರ್ಯಾಲಯ,

-ಸಂಖ್ಯೆ : ಪ್ರ.ಇ/ಉ.ನಿ./ವಿಜಯಪುರ/17-18/ ದಿನಾಂಕ: 07.09.2017

## ಅಧಿಸೂಚನೆ

**ವಿಷಯ:** 2016-17ನೇ ಸಾಲಿನ **ಹಿಂಬಾಕಿ** ಉಳಿದ ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗದ ನಿರುದ್ಯೋಗಿ ಅಭ್ಯರ್ಥಿಗಳಿಗೆ ಪ್ರವಾಸಿ ಟ್ಯಾಕ್ಸಿ ಖರೀದಿಸಲು ಸಹಾಯ ಧನವನ್ನು ಒದಗಿಸುವ ಯೋಜನೆಗೆ ಅರ್ಜಿಯನ್ನು ಆಹ್ವಾನಿಸುವ ಕುರಿತು.

**ಉಲ್ಲೇಖ:**
1. ಸರಕಾರದ ಆದೇಶ ಸಂಖ್ಯೆ: ಪ್ರಇ 297 ಪ್ರವಾಯೋ 2016 ದಿನಾಂಕ:02.11.2016
2. ಮಾನ್ಯ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು. ಇವರ ಅಧಿಕೃತ ಜ್ಞಾಪನ ಪತ್ರ ಸಂಖ್ಯೆ: ಪ್ರಇ/ಯೋ-1/5/2016-17 ದಿನಾಂಕ:02.11.2016.

********

ಕರ್ನಾಟಕ ಸರ್ಕಾರ ಪ್ರವಾಸೋದ್ಯಮ ಇಲಾಖೆ ವತಿಯಿಂದ 2016-17ನೇ ಸಾಲಿನಲ್ಲಿ ಹಿಂಬಾಕಿ ಉಳಿದ ಹಿಂದುಳಿದ ಮತ್ತು ಅಲ್ಪಸಂಖ್ಯಾತ ವರ್ಗ(ಪ್ರವರ್ಗ-1,2ಎ,2ಬಿ,3ಎ ಮತ್ತು 3ಬಿ)ಕ್ಕೆ ಸೇರಿದ **ಒಟ್ಟು "34"** ಅರ್ಹ ನಿರುದ್ಯೋಗಿ ಯುವಕ / ಯುವತಿಯರಿಗೆ ಪ್ರವಾಸೋದ್ಯಮ ಕ್ಷೇತ್ರದಲ್ಲಿ ಸ್ವಯಂ ಉದ್ಯೋಗವನ್ನು ಕಲ್ಪಿಸಿ ಕೊಡುವ ದೃಷ್ಟಿಯಿಂದ, ಉಲ್ಲೇಖಿತ ಪತ್ರಗಳ ಆದೇಶಾನುಸಾರ ಪ್ರವಾಸಿ ಟ್ಯಾಕ್ಸಿ ಖರೀದಿಸಲು ಸಹಾಯ ಧನವನ್ನು ಒದಗಿಸುವ ಯೋಜನೆಗೆ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಪ್ರವಾಸಿ ಟ್ಯಾಕ್ಸಿ ಖರೀದಿಸಲು ತಗುಲುವ ಒಟ್ಟು ವೆಚ್ಚದಲ್ಲಿ ಗರಿಷ್ಠ **ರೂ.2.00 ಲಕ್ಷಗಳ** ಸಹಾಯಧನ ಮೊತ್ತವನ್ನು ಇಲಾಖೆಯಿಂದ ನೀಡಲಾಗುವುದು, ಶೇ.5 ರಷ್ಟು ಬೀಜಧನವನ್ನು ಅಭ್ಯರ್ಥಿಯೇ ಭರಿಸುವುದು ಹಾಗೂ ಉಳಿದ ಮೊತ್ತವನ್ನು ರಾಷ್ಟ್ರೀಕೃತ/ ವಾಣಿಜ್ಯ ಬ್ಯಾಂಕುಗಳ ಮೂಲಕ ಸಾಲವನ್ನು ಫಲಾನುಭವಿಯು ಪಡೆದುಕೊಳ್ಳಬೇಕಾಗಿರುತ್ತದೆ.

## ಮಾರ್ಗಸೂಚಿಗಳು.

### I. ಅರ್ಜಿದಾರರು ಹೊಂದಿರಬೇಕಾದ ಅರ್ಹತೆಗಳು:

1. ಅರ್ಜಿದಾರರು ಹಿಂದುಳಿದ ಅಥವಾ ಅಲ್ಪಸಂಖ್ಯಾತ ವರ್ಗಕ್ಕೆ ***(ಪ್ರವರ್ಗ-1,2ಎ,2ಬಿ,3ಎ ಮತ್ತು 3ಬಿ)*** ಸೇರಿದವರಾಗಿರಬೇಕು.
2. ಅರ್ಜಿದಾರರು 20 ರಿಂದ 40 ವರ್ಷದೊಳಗಿರಬೇಕು.
3. ಅರ್ಜಿದಾರರು ಕಡ್ಡಾಯವಾಗಿ 10ನೇ ತರಗತಿಯಲ್ಲಿ ಉತ್ತೀರ್ಣರಾಗಿರಬೇಕು.
4. ಅಭ್ಯರ್ಥಿಗಳು ಲಘುವಾಹನ ಚಾಲನಾ ಪರವಾನಿಗೆ ಪಡೆದು ಕನಿಷ್ಠ ಒಂದು ವರ್ಷವಾಗಿರಬೇಕು, ಅಭ್ಯರ್ಥಿಗಳು ವಾಹನ ಪರವಾನಿಗೆಯೊಂದಿಗೆ **ಕ್ಯಾಬ್ ಬ್ಯಾಡ್ಜ್** ಹೊಂದಿರುವುದು ಕಡ್ಡಾಯವಾಗಿರುತ್ತದೆ.
5. ನಗರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ.55,000/- ಗಳನ್ನು ಮೀರಬಾರದು.
6. ಗ್ರಾಮಾಂತರ ಪ್ರದೇಶದ ಫಲಾನುಭವಿಗಳ ವಾರ್ಷಿಕ ಆದಾಯ ರೂ. 40,000/- ಮೀರಬಾರದು.
7. ಅರ್ಜಿದಾರರು ಕಡ್ಡಾಯವಾಗಿ ವಿಜಯಪುರ ಜಿಲ್ಲೆಯ ನಿವಾಸಿಯಾಗಿರಬೇಕು.
8. ಅರ್ಜಿದಾರನು ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರಬಾರದು.
9. ಈಗಾಗಲೇ ಕುಟುಂಬದ ಸದಸ್ಯನೊಬ್ಬನು ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಪಡೆದಿದ್ದರೆ ಅದೇ ಕುಟುಂಬದ ಮತ್ತೊಬ್ಬ ಸದಸ್ಯನಿಗೆ ಈ ಅವಕಾಶ ನೀಡಲಾಗುವುದಿಲ್ಲ. ಒಂದು ವೇಳೆ ಆ ಸದಸ್ಯನು ವಿವಾಹವಾಗಿ ಪ್ರತ್ಯೇಕವಾಗಿ ವಾಸವಿದ್ದಲ್ಲಿ, ಪಡಿತರ ಚೀಟಿಯ ದಾಖಲೆಯೊಂದಿಗೆ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗುತ್ತದೆ.
10. **ನಿರುದ್ಯೋಗಿ ಮಹಿಳಾ ಅಭ್ಯರ್ಥಿಗಳಿಗೆ ಶೇ.15 ರಷ್ಟು ಗುರಿ** ಮೀಸಲಿರಿಸಲಾಗಿದೆ. ಒಂದು ವೇಳೆ ಮಹಿಳಾ ಅಭ್ಯರ್ಥಿಗಳು ಅರ್ಜಿಸಲ್ಲಿಸದೇ ಇದ್ದಲ್ಲಿ, ಪುರುಷ ಅಭ್ಯರ್ಥಿಗಳಿಗೆ ಸದರಿ ಗುರಿಯನ್ನು ಹಂಚಿಕೆ ಮಾಡಲಾಗುವುದು.

## II. ಅರ್ಜಿ ಸಲ್ಲಿಸುವ ವಿಧಾನ:

ನಿಗದಿತ ನಮೂನೆಯ ಅರ್ಜಿ ಹಾಗೂ ಮಾಹಿತಿ/ಸೂಚನೆಗಳನ್ನು ವಿಜಯಪುರ ಜಿಲ್ಲಾ ಆಡಳಿತದ ಅಧಿಕೃತ ವೆಬ್‌ಸೈಟ್ http://www.vijayapura.nic.in/ ನಲ್ಲಿ ದಿನಾಂಕ 14.09.2017 ರಂದು ಪ್ರಕಟಿಸಲಾಗುವುದು. ಅರ್ಜಿ ನಮೂನೆಯನ್ನು ಅಭ್ಯರ್ಥಿಗಳು ಸದರಿ ವೈಬ್‌ಸೈಟ್‌ನಿಂದ ಪಡೆದು ಪಾಸಪೋರ್ಟ್ ಅಳತೆಯ-2 ಬಣ್ಣದ ಇತ್ತೀಚಿನ ಭಾವಚಿತ್ರ ಹಾಗೂ ಸಹಿಯೊಂದಿಗೆ ಅರ್ಜಿಯಲ್ಲಿರುವ ಎಲ್ಲಾ ವಿವರಗಳನ್ನು ಸಮರ್ಪಕವಾಗಿ ಭರ್ತಿ ಮಾಡಿ ದ್ವಿಪ್ರತಿಯೊಂದಿಗೆ ***ಉಪನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬ್ಲಾಕ್-1, ಪ್ರವಾಸಿ ಪ್ಲಾಜಾ, ಇಂಡಿ ರಸ್ತೆ, ವಿಜಯಪುರ ರವರ ಕಛೇರಿಗೆ*** ಸಲ್ಲಿಸುವುದು ಹಾಗೂ ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ:08352-250359ಗೆ ಸಂಪರ್ಕಿಸಬಹುದಾಗಿದೆ.

- ಅರ್ಜಿ ಸಲ್ಲಿಸಲು ಪ್ರಾರಂಭದ ದಿನಾಂಕ:14.09.2017, ಬೆಳಗ್ಗೆ:10.00 ಗಂಟೆಯಿಂದ
- ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 13.10.2017, ಸಂಜೆ:05.00 ಗಂಟೆ ವರೆಗೆ

## III. ಅರ್ಜಿದಾರರು ಸಲ್ಲಿಸಬೇಕಾದ ದಾಖಲೆಗಳು ( ಕ್ರಮಬದ್ಧವಾಗಿ 1 ರಿಂದ 13 ರ ವರೆಗಿನ ದಾಖಲೆಗಳನ್ನು ಲಗತ್ತಿಸುವುದು)

1. ಜಿಲ್ಲಾಧಿಕಾರಿಗಳಿಂದ ಜಾಹಿರಾತು ಪ್ರಕಟಣೆಗೊಂಡ 30 ದಿನಗಳ ಒಳಗಾಗಿ ನಿಗದಿಪಡಿಸಿದ ಅರ್ಜಿ ನಮೂನೆಯನ್ನು ಭರ್ತಿ ಮಾಡಿ ಇತ್ತೀಚಿನ ಭಾವಚಿತ್ರದೊಂದಿಗೆ, **ದ್ವಿಪ್ರತಿ** ಯಲ್ಲಿ ಅರ್ಜಿಯನ್ನು ಸಲ್ಲಿಸಬೇಕು.
2. ಅರ್ಜಿದಾರರ ಹೆಸರು ಇರುವ ಪಡಿತರ ಚೀಟಿ(ಬಿ.ಪಿ.ಎಲ್. ಕಾರ್ಡ ಹೊಂದಿದವರಿಗೆ ಮೊದಲ ಆದ್ಯತೆ) ಹಾಗೂ ಆಧಾರ ಕಾರ್ಡ ಪ್ರತಿಯನ್ನು ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.
3. ಹಿಂದುಳಿದ ಅಥವಾ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿರುವ ಬಗ್ಗೆ ತಹಶೀಲ್ದಾರರಿಂದ ಪಡೆದುಕೊಂಡಿರುವ ಚಾಲ್ತಿಯಲ್ಲಿರುವ ನಿಗದಿತ ಜಾತಿ ಪ್ರಮಾಣ ಪತ್ರದ ಪ್ರತಿ.
4. ತಹಶೀಲ್ದಾರರಿಂದ ಪಡೆದುಕೊಂಡಿರುವ ಚಾಲ್ತಿಯಲ್ಲಿರುವ ಆದಾಯ ಪ್ರಮಾಣ ಪತ್ರದ ಪ್ರತಿ.
5. ಅರ್ಜಿದಾರರು ಕಡ್ಡಾಯ ವಿಜಯಪುರ ಜಿಲ್ಲೆಯವರಾಗಿರುವುದಕ್ಕೆ ಪುರಾವೆಯಾಗಿ ತಹಶೀಲ್ದಾರ್ / ಮಹಾನಗರ ಪಾಲಿಕೆ / ನಗರ ಪಾಲಿಕೆ / ನಗರ ಸಭೆ / ಪುರಸಭೆ / ಗ್ರಾಮಪಂಚಾಯತಿ / ಪಟ್ಟಣ ಪಂಚಾಯತಿ ಇವುಗಳಲ್ಲಿ ಅರ್ಜಿದಾರರಿಗೆ ಅನ್ವಯಿಸುವ ವಾಸಸ್ಥಳ ಪ್ರಮಾಣ ಪತ್ರದ ಪ್ರತಿ.
6. ಕ್ಯಾಬ್ ಬ್ಯಾಡ್ಜ್ ಹೊಂದಿರುವ ಖಾಯಂ ಲಘುವಾಹನ ಚಾಲನಾ ಪರವಾನಗಿ ಪತ್ರ ಹಾಗೂ ಆರ್.ಟಿ.ಓ(RTO) ರವರಿಂದ ಪಡೆದಿರುವ ಡಿ.ಎಲ್. ಎಕ್ಸ್‌ಟ್ರ್ಯಾಕ್ಟ್ ಪ್ರತಿಯನ್ನು ಅರ್ಜಿಯೊಂದಿಗೆ ಲಗತ್ತಿಸುವುದು ಕಡ್ಡಾಯವಾಗಿರುತ್ತದೆ.
7. ಎಸ್.ಎಸ್.ಎಲ್.ಸಿ.ಯಲ್ಲಿ ಉತ್ತೀರ್ಣರಾಗಿರುವ ಅಂಕಪಟ್ಟಿಯ ಪ್ರತಿ ಕಡ್ಡಾಯವಾಗಿ ಲಗತ್ತಿಸಬೇಕು.
8. ಅರ್ಜಿದಾರರು ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿರದ ಬಗ್ಗೆ, ಅಭ್ಯರ್ಥಿಯ ಕುಟುಂಬದಲ್ಲಿ ಯಾವ ಒಬ್ಬ ಸದಸ್ಯನು ಸರ್ಕಾರಿ ನೌಕರಿ ಹೊಂದಿಲ್ಲದ ಬಗ್ಗೆ, ವಿಜಯಪುರ ಮಹಾನಗರ ಪಾಲಿಕೆ/ನಗರ ಸಭೆ / ಪುರಸಭೆ/ಗ್ರಾಮಪಂಚಾಯತಿ/ಪಟ್ಟಣ ಪಂಚಾಯತಿ ಇವುಗಳಿಂದ ಸ್ವಉದ್ಯೋಗ ಕಲ್ಪಿಸಿಕೊಳ್ಳುವ ಸೌಲಭ್ಯ ಪಡೆಯದೇ ಇರುವ ಬಗ್ಗೆ, ಕುಟುಂಬದ ಯಾವ ಸದಸ್ಯನು ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಪಡೆದಿಲ್ಲ ಎಂಬ ಬಗ್ಗೆ – ಸ್ವಯಂ ಪ್ರಮಾಣೀಕರಿಸಿ ರೂ.50/-ರ ಬೆಲೆಯ ಛಾಪಾ ಕಾಗದ(Affidavit)ದಲ್ಲಿ ನಮೂನೆ-03 ರಂತೆ ಮುಚ್ಚಳಿಕೆ ಪ್ರಮಾಣ ಪತ್ರ ಸಲ್ಲಿಸತಕ್ಕದ್ದು.
9. ಈಗಾಗಲೇ ಕುಟುಂಬದ ಸದಸ್ಯನೊಬ್ಬನು ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಪಡೆದಿದ್ದರೆ ಅದೇ ಕುಟುಂಬದ ಮತ್ತೊಬ್ಬ ಸದಸ್ಯನಿಗೆ ಈ ಅವಕಾಶ ನೀಡಲಾಗುವುದಿಲ್ಲ. ಒಂದು ವೇಳೆ ಆ ಸದಸ್ಯನು ವಿವಾಹವಾಗಿ ಪ್ರತ್ಯೇಕವಾಗಿ ವಾಸವಿದ್ದಲ್ಲಿ, ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗುತ್ತದೆ. ಈ ಸಂಬಂಧ ಅಭ್ಯರ್ಥಿಯ ಪಡಿತರ ಚೀಟಿಯನ್ನು ಆಧಾರದೊಂದಿಗೆ ಸಲ್ಲಿಸತಕ್ಕದ್ದು.
10. ಅರ್ಜಿಯಲ್ಲಿ ಅಭ್ಯರ್ಥಿಗಳು ದೂರವಾಣಿ ಸಂಖ್ಯೆ ನಮೂದಿಸುವುದು ಕಡ್ಡಾಯವಾಗಿರುತ್ತದೆ.
11. ಆಯ್ಕೆಯಾದ ನಂತರ ಅಭ್ಯರ್ಥಿಗಳ ವಿರುದ್ಧ ಯಾವುದೇ ಕ್ರಿಮಿನಲ್ ಮೊಕದ್ದಮೆ ಇಲ್ಲದೇ ಇರುವ ಬಗ್ಗೆ ಆಯಾ ವ್ಯಾಪ್ತಿಯ ಪೋಲೀಸ್ ಠಾಣೆಯಿಂದ ನಿರಾಕ್ಷೇಪಣಾ ಪತ್ರವನ್ನು ಸಲ್ಲಿಸುವುದು.
12. ಅರ್ಜಿದಾರನು ಮೇಲಿನ ಎಲ್ಲಾ ದಾಖಲಾತಿಗಳನ್ನು ಸ್ವಯಂ ಧೃಡೀಕರಿಸಿ ಸಲ್ಲಿಸತಕ್ಕದ್ದು.
13. ಆಯ್ಕೆಯಾದ ನಂತರ ಅಭ್ಯರ್ಥಿಗಳು ಪಡೆಯುವ ಪ್ರವಾಸಿ ವಾಹನವನ್ನು ಯಾರಿಗೂ ಪರಭಾರೆ ಮಾಡುವುದಿಲ್ಲವೆಂದು ನೋಟರಿಯಿಂದ ಪ್ರಮಾಣೀಕರಿಸಿದ ರೂ: 50/-ರ ಬೆಲೆಯ ಮುಚ್ಚಳಿಕೆ ಪತ್ರವನ್ನು ಸಲ್ಲಿಸುವುದು.

## IV. ಷರತ್ತುಗಳು:

1. ಫಲಾನುಭವಿಯೇ ಸ್ವತಃ ಟ್ಯಾಕ್ಸಿಯನ್ನು ಚಲಾಯಿಸಬೇಕು ಮತ್ತು 5 ವರ್ಷಗಳವರೆಗೆ ಬೇರೆಯವರಿಗೆ ಪರಭಾರೆ ಮಾಡುವಂತಿಲ್ಲ. ಒಂದು ವೇಳೆ ಪರಭಾರೆ ಮಾಡಿರುವುದು ಕಂಡುಬಂದಲ್ಲಿ ಆರ್.ಟಿ.ಓ ರವರಿಂದ ಟ್ಯಾಕ್ಸಿ ಮುಟ್ಟುಗೋಲು ಹಾಕಿಕೊಳ್ಳಲು ಕ್ರಮ ವಹಿಸಲಾಗುವುದು.
2. ಪ್ರತಿ ವರ್ಷ ಫಲಾನುಭವಿಯು ಗಳಿಸಿದ ಆದಾಯದ ವಿವರವನ್ನು ಜಿಲ್ಲಾ ಮಟ್ಟದ ಪ್ರವಾಸೋದ್ಯಮ ಇಲಾಖೆಯ ಕಛೇರಿಗೆ ನೀಡುವುದು ಕಡ್ಡಾಯವಾಗಿರುತ್ತದೆ.
3. ಫಲಾನುಭವಿಯು ತೆಗೆದುಕೊಳ್ಳುವ ಬ್ಯಾಂಕಿನ ಸಾಲದ ಮೊತ್ತವನ್ನು ನಿರಂತರವಾಗಿ ಮರು ಪಾವತಿ ಮಾಡುವುದು, ತಪ್ಪಿದ್ದಲ್ಲಿ ಸಂಬಂಧಿಸಿದ ಬ್ಯಾಂಕ್‌ನವರಿಗೆ ಪ್ರವಾಸಿ ಟ್ಯಾಕ್ಸಿ ಮುಟ್ಟುಗೋಲು ಹಾಕಲು ಸೂಚಿಸಲಾಗುವುದು.
4. ಫಲಾನುಭವಿಗಳು ಖರೀದಿಸುವ ಪ್ರವಾಸಿ ಟ್ಯಾಕ್ಸಿಯನ್ನು ಸಾಲ ಮಂಜೂರಾತಿ ಮಾಡಿದ ಬ್ಯಾಂಕ್ ಹೆಸರಿಗೆ ಅಡಮಾನಿಕೆ(Hypothecation) ಮಾಡಿಕೊಳ್ಳತಕ್ಕದ್ದು.
5. ಫಲಾನುಭವಿಗಳು ಪ್ರವಾಸಿಗರೊಡನೆ ಉತ್ತಮ ನಡುವಳಿಕೆಯಿಂದ ವರ್ತಿಸುವುದು. ಕನ್ನಡ ಭಾಷಾ ಜ್ಞಾನ ಹಾಗೂ ಇತರೆ ಭಾಷೆಗಳ ಪರಿಣಿತಿ, ಪ್ರವಾಸಿ ಸ್ಥಳಗಳ ಪರಿಚಯ ಮುಂತಾದ ವಿಷಯಗಳ ಬಗ್ಗೆ ಸಾಮಾನ್ಯ ಜ್ಞಾನ ಹೊಂದಿರಬೇಕು.
6. ಫಲಾನುಭವಿಯು ಸ್ವ-ಇಚ್ಛೆಯಿಂದ ಯಾವುದೇ ಮಾದರಿಯ ವಾಹನವನ್ನು ಖರೀದಿಸಬಹುದು. ವಾಹನದ ಮೇಲೆ ಪ್ರವಾಸೋದ್ಯಮ ಇಲಾಖೆಯ ಲೋಗೋ, "ಪ್ರವಾಸೋದ್ಯಮ ಇಲಾಖೆಯ ನೆರವು" ಎಂದು ಚಿತ್ರರಿಸುವುದು ಹಾಗೂ ಬ್ರಾಂಡಿಂಗ್ ಬಗ್ಗೆ ಸರ್ಕಾರದ ಮುಂದಿನ ಆದೇಶಗಳನ್ನು ಪಾಲಿಸುವುದು ಕಡ್ಡಾಯವಾಗಿರುತ್ತದೆ.

## V. ಆಯ್ಕೆ ವಿಧಾನ

1. ಅಭ್ಯರ್ಥಿಯ ವಯಸ್ಸಿನ ಜೇಷ್ಠತೆ ಮೇರೆಗೆ:-

$$\text{ಸೂತ್ರ} = \frac{\text{ಅಭ್ಯರ್ಥಿಯ ವಯಸ್ಸು} \times 100}{\text{ನಿಗದಿಪಡಿಸಿದ ವಯಸ್ಸು}(40)}$$

$$= \frac{\text{ಬರುವ ಫಲಿತಾಂಶ} \times 60}{100} = \text{ಅಭ್ಯರ್ಥಿಯ ವಯಸ್ಸಿನ ಜೇಷ್ಠತೆ ಮೇರೆಗೆ ಪಡೆದ ಫಲಿತಾಂಶ}$$

[A]

2. ಎಸ್.ಎಸ್.ಎಲ್.ಸಿ ಯಲ್ಲಿ ಪಡೆದ ಅಂಕಗಳ ಜೇಷ್ಠತೆ ಮೇರೆಗೆ :-

$$\text{ಸೂತ್ರ} = \frac{\text{ಎಸ್.ಎಸ್.ಎಲ್.ಸಿ ಯಲ್ಲಿ ಅಭ್ಯರ್ಥಿಯ ಪಡೆದ ಒಟ್ಟು ಅಂಕಗಳ ಶೇಕಡ} \times 100}{\text{ನಿಗದಿಪಡಿಸಿದ ಅಂಕದ ಮಿತಿ } (45\%)}$$

$$= \frac{\text{ಬರುವ ಫಲಿತಾಂಶ} \times 40}{100} = \text{ಎಸ್.ಎಸ್.ಎಲ್.ಸಿ ಯಲ್ಲಿ ಪಡೆದ ಅಂಕಗಳ ಜೇಷ್ಠತೆ ಮೇರೆಗೆ ಪಡೆದ ಫಲಿತಾಂಶ}$$

[B]

ಅಭ್ಯರ್ಥಿಯ ವಯಸ್ಸಿನ ಜೇಷ್ಠತೆ ಮೇರೆಗೆ ಪಡೆದ ಫಲಿತಾಂಶ **[A]** **+** ಎಸ್.ಎಸ್.ಎಲ್.ಸಿ ಯಲ್ಲಿ ಪಡೆದ ಅಂಕಗಳ ಜೇಷ್ಠತೆ ಮೇರೆಗೆ ಪಡೆದ ಫಲಿತಾಂಶ **[B]**

= ಅಭ್ಯರ್ಥಿ ಪಡೆಯುವ ಒಟ್ಟು ಶೇಕಡವಾರು ಫಲಿತಾಂಶ

ಅಭ್ಯರ್ಥಿಯು ಪಡೆಯುವ ಒಟ್ಟು ಶೇಕಡವಾರು ಫಲಿತಾಂಶದ ಏರಿಕೆಯಿಂದ ಇಳಿಕೆ ಕ್ರಮದಲ್ಲಿ(Descending Order) ಬರುವ ಶೇಕಡವಾರು ಆಧಾರದ ಮೇಲೆ ಅಭ್ಯರ್ಥಿಗಳ ಆಯ್ಕೆಯ ಮಾನದಂಡವನ್ನಾಗಿಸಿಕೊಂಡು, ವಿಜಯಪುರ ಜಿಲ್ಲೆಗೆ ಹಿಂದುಳಿದ ಹಾಗೂ ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಒಟ್ಟು "34 "ಅರ್ಹ ನಿರುದ್ಯೋಗಿ ಯುವಕ / ಯುವತಿಯರಿಗೆ ಪ್ರವಾಸಿ ಟ್ಯಾಕ್ಸಿ ಖರೀದಿಸಲು ಗರಿಷ್ಠ **ರೂ. 2.00 ಲಕ್ಷಗಳ** ಸಹಾಯಧನ ಸೌಲಭ್ಯ ಪಡೆಯುವ ಯೋಜನೆಗೆ ಆಯ್ಕೆ ಮಾಡಲಾಗುತ್ತದೆ.

ಈ-ಮೇಲ್: adrtobijapur2014@gmail.com

**VI. ಆಯ್ಕೆ ಸಮಿತಿ**

ಫಲಾನುಭವಿಗಳ ಅರ್ಹತಾ ಪಟ್ಟಿ ಆಯ್ಕೆ ಮಾಡುವ ಸಮಿತಿ

i. ಉಪವಿಭಾಗಾಧಿಕಾರಿಗಳು, ವಿಜಯಪುರ – ಅಧ್ಯಕ್ಷರು
ii. ತಹಶೀಲ್ದಾರರು, ವಿಜಯಪುರ – ಸದಸ್ಯರು
iii. ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿ ಅಧಿಕಾರಿಗಳು, ವಿಜಯಪುರ – ಸದಸ್ಯರು
iv. ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿ (ಡಿ.ಒ.ಬಿ.ಸಿ), ವಿಜಯಪುರ – ಸದಸ್ಯರು
v. ಪ್ರಾದೇಶಿಕ ಸಾರಿಗೆ ಅಧಿಕಾರಿ, ವಿಜಯಪುರ – ಸದಸ್ಯರು
vi. ವ್ಯವಸ್ಥಾಪಕರು, ಲೀಡ್ ಬ್ಯಾಂಕ್,ವಿಜಯಪುರ – ಸದಸ್ಯರು
vii. ಉಪ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ವಿಜಯಪುರ – ಸದಸ್ಯ ಕಾರ್ಯದರ್ಶಿಗಳು

ಸಹಿ/-

**(ಶಿವಕುಮಾರ ಕೆ.ಬಿ.)**
ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು
ಜಿಲ್ಲಾ ಪ್ರವಾಸೋದ್ಯಮ ಅಭಿವೃದ್ಧಿ ಸಮಿತಿ
ವಿಜಯಪುರ.

**ಪ್ರತಿಯನ್ನು:**

1. ಮಾನ್ಯ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಬೆಂಗಳೂರು ರವರ ಆದ್ಯ ಅವಗಾಹನೆಗಾಗಿ ಸಲ್ಲಿಸಿದೆ.
2. ಉಪವಿಭಾಗಾಧಿಕಾರಿಗಳು, ವಿಜಯಪುರ, ಇವರ ಮಾಹಿತಿಗಾಗಿ ಸಲ್ಲಿಸಿದೆ.
3. ತಹಸೀಲ್ದಾರರು,ವಿಜಯಪುರ ಇವರ ಮಾಹಿತಿಗಾಗಿ ಸಲ್ಲಿಸಿದೆ.
4. ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಅಭಿವೃದ್ಧಿ ಅಧಿಕಾರಿಗಳು, ವಿಜಯಪುರ ಇವರ ಮಾಹಿತಿಗಾಗಿ ಸಲ್ಲಿಸಿದೆ.
5. ಜಿಲ್ಲಾ ಹಿಂದುಳಿದ ವರ್ಗಗಳ ಅಧಿಕಾರಿ (ಡಿ.ಒ.ಬಿ.ಸಿ) ವಿಜಯಪುರ ಇವರ ಮಾಹಿತಿಗಾಗಿ ಸಲ್ಲಿಸಿದೆ.
6. ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ವಿಜಯಪುರ ಇವರ ಮಾಹಿತಿಗಾಗಿ ಸಲ್ಲಿಸಿದೆ.
7. ವ್ಯವಸ್ಥಾಪಕರು, ಲೀಡ್ ಬ್ಯಾಂಕ್, ವಿಜಯಪುರ ಇವರ ಮಾಹಿತಿಗಾಗಿ ಸಲ್ಲಿಸಿದೆ.
8. ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕಾಧಿಕಾರಿಗಳು, ವಿಜಯಪುರ ರವರ ಮಾಹಿತಿಗಾಗಿ ಹಾಗೂ ಸದರಿ ವಿಷಯವನ್ನು ಜಿಲ್ಲೆಯ ಪ್ರಮುಖ ಪತ್ರಿಕೆಗಳಲ್ಲಿ ಉಚಿತವಾಗಿ ಪ್ರಕಟಿಸಲು ಸೂಚಿಸಿದೆ.
9. ಜಿಲ್ಲಾ ಮಾಹಿತಿ ಮತ್ತು ಸೂಚನಾಧಿಕಾರಿಗಳು, ಜಿಲ್ಲಾ ಮಾಹಿತಿ ಮತ್ತು ಸೂಚನಾ ಕೇಂದ್ರ(NIC) ವಿಜಯಪುರ ರವರ ಮಾಹಿತಿಗಾಗಿ ಹಾಗೂ ಅರ್ಜಿ ನಮೂನೆಯನ್ನು ಜಿಲ್ಲಾ ಆಡಳಿತದ ಅಧಿಕೃತ ವೆಬ್‌ಸೈಟ್ http://www.vijayapura.nic.in/ ನಲ್ಲಿ ಪ್ರಕಟಿಸಲು ಕ್ರಮವಹಿಸುವಂತೆ ಸೂಚಿಸಿದೆ.

# ನಮೂನೆ-3

**First Party**- Candidate Name
**Second Party** - Deputy Commissioner & President, District Tourism Development Committee, Vijayapura

ರೂ.50 ಛಾಪಾ ಕಾಗದ

## ಸ್ವಯಂ ದೃಢೀಕರಣ ಪತ್ರ

ಶ್ರೀ/ಶ್ರೀಮತಿ/ಕುಮಾರಿ ____________ ತಂದೆ/ಗಂಡನ ಹೆಸರು _____________ ಆದ ನಾನು ________ ಮನೆ ನಂ. ___________ ಗ್ರಾಮ, ___________ ಹೋಬಳಿ, __________ ತಾಲ್ಲೂಕು, ___________ ಜಿಲ್ಲೆಯಲ್ಲಿ ವಾಸಿಯಾಗಿದ್ದು, ಈ ಕೆಳಕಂಡ ಸೌಲಭ್ಯಗಳನ್ನು ಪಡೆದಿರುವುದಿಲ್ಲವೆಂದು ಹಾಗೂ ಇದು ಸತ್ಯವೆಂದು ಪ್ರಮಾಣಿಕರಿಸಿ, ಸ್ವಯಂ ದೃಢೀಕರಿಸುತ್ತೇನೆ.

1. ನಾನು ಯಾವುದೇ ಸರ್ಕಾರಿ ಇಲಾಖೆಯಲ್ಲಿ ಅಥವಾ ನಿಗಮ ಮಂಡಳಿಗಳಲ್ಲಿ ಖಾಯಂ ನೌಕರಿಯಲ್ಲಿಲ್ಲವೆಂದು ಹಾಗೂ ನನ್ನ ಕುಟುಂಬದಲ್ಲಿ ಯಾವ ಒಬ್ಬ ಸದಸ್ಯನು ಸರ್ಕಾರಿ ನೌಕರಿ ಹೊಂದಿಲ್ಲವೆಂದು,
2. ನಾನು ವಿಜಯ ಎಪ ಎರ ಮಹಾನಗರ ಪಾಲಿಕೆ/ನಗರಸಭೆ/ಪುರಸಭೆ/ಪಟ್ಟಣ ಪಂಚಾಯಿತಿ /ಗ್ರಾಮ ಪಂಚಾಯಿತಿ-ಇವುಗಳಿಂದ ಸ್ವ-ಉದ್ಯೋಗ ಕಲ್ಪಿಸಿಕೊಳ್ಳುವ ಸೌಲಭ್ಯ ಪಡೆದಿಲ್ಲವೆಂದು,
3. ನನ್ನ ಕುಟುಂಬದ ಯಾವ ಸದಸ್ಯನು ಈಗಾಗಲೇ ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಟ್ಯಾಕ್ಸಿ ಪಡೆದಿಲ್ಲವೆಂದು,

ಒಂದು ವೇಳೆ ಮೇಲ್ಕಂಡ ಸೌಲಭ್ಯಗಳನ್ನು ಪಡೆದಿದ್ದಲ್ಲಿ ಹಾಗೂ ನಾನು ನೀಡಿರುವ ಮಾಹಿತಿ ಸುಳ್ಳಾಗಿದ್ದಲ್ಲಿ, ನನ್ನ ವಿರುದ್ಧ ಕಾನೂನು ರೀತ್ಯಾ ಕ್ರಮ ಕೈಗೊಳ್ಳಬಹುದೆಂದು ಈ ಮೂಲಕ ಪ್ರಮಾಣಿಕರಿಸುತ್ತೇನೆ.

(ಅರ್ಜಿದಾರರ ಸಹಿ ಮತ್ತು ಹೆಸರು)

ಸ್ಥಳ:
ದಿನಾಂಕ: